ಇ) ಜಿಲ್ಲಾ ಪರಿಷತ್‌ನವರು (ಬಿಜಾಪುರ ಜಿಲ್ಲೆ) 26 ಪ್ರೌಢಶಾಲೆಗಳನ್ನು ಅನುದಾನಕ್ಕೆ ಒಳಪಡಿಸಲು ಶಿಫಾರಸ್ಸು ಮಾಡಿದ್ದು ಈ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ಈ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಶ್ರೀ ಕಾಳಿದಾಸ ಆಯುರ್ವೇದ ಕಾಲೇಜನ್ನು ಪ್ರೊಜೆಕ್ಟ್ ಮಿನಿ ಸ್ಕೀಮಿಗೆ ಸೇರಿಸುವುದು

574 - ಶ್ರೀ ಬಿ.ಬಿ. ಚಿಮ್ಮನಕಟ್ಟಿ (ಬಾದಾಮಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಾದಾಮಿ ಶ್ರೀ ಕಾಳಿದಾಸ ಆಯುರ್ವೇದ ಕಾಲೇಜು, ಕಾಳಿದಾಸ ಶಿಕ್ಷಣ ಸಮಿತಿಯವರು ಪ್ರಾಜೆಕ್ಟ್ ಮಿನಿ ಫ್ಯಾಮಿಲಿ ವೆಲ್‌ಫೇರ್ ಸೆಂಟರ್ ಸ್ಕೀಂ ಮತ್ತು ಓಪಿನಿಯನ್ ಲೀಡರ್ಸ್ ಯೋಜನೆಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ವಿನಂತಿಸಿಕೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಯಾವಾಗ ಶಿಫಾರಸ್ಸು ಮಾಡಿ ಕಳುಹಿಸಲಾಗಿದೆ?

ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಕುಂದಾಪುರ ಹಳ್ಳಿ ಹೊಳೆಯಲ್ಲಿ ಪ್ರೌಢಶಿಕ್ಷಣ ಶಾಲೆ ಪ್ರಾರಂಭಿಸುವುದು

325 - ಶ್ರೀ ಕೆ. ಪ್ರತಾಪ ಚಂದ್ರಶೆಟ್ಟಿ (ಕುಂದಾಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕುಂದಾಪುರ ತಾಲ್ಲೂಕು ಹಳ್ಳಿ ಹೊಳೆಗೆ ಸರ್ಕಾರಿ ಪ್ರೌಢಶಾಲೆ ಕಳೆದ ವರ್ಷ ಮಂಜೂರಾಗಿದ್ದು ನಿಜವಲ್ಲವೆ; ಸದರಿ ಶಾಲೆಯನ್ನು ಪ್ರಾರಂಭಿಸಲು ಪಂಚಾಯಿತಿಯವರು ಮುಂದೆ ಬಂದರೂ ಪ್ರಾರಂಭಿಸದಿರಲು ಕಾರಣವೇನು?

ಆ) ತಕ್ಷಣ ಪ್ರಾರಂಭಿಸಲು ವ್ಯವಸ್ಥೆ ಮಾಡಲಾಗುವುದೇ?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಮಂಜೂರಾಗಿರುವುದಿಲ್ಲ.

ಆ) ಸರ್ಕಾರಿ ಪ್ರೌಢಶಾಲೆ ಮಂಜೂರು ಸದರಿ ಗ್ರಾಮಕ್ಕೆ ಮಾಡುವ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಈ ಬಗ್ಗೆ ಮುಂದಿನ ವರ್ಷ ಪರಿಶೀಲಿಸಲಾಗುವುದು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಾಲುಮಡ್ಡಿ ಲೂಟಿ

327 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಅರಣ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾಡಿನ ಹಾಲು ಮಡ್ಡಿ ಲೂಟಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದ ಸರ್ಕಾರದ ಬೊಕ್ಕಸಕ್ಕೆ ಲಕ್ಷಾಂತರ ರೂ. ನಷ್ಟವಾಗುವುದಿಲ್ಲವೆ?

ಇ) ಹಾಲುಮಡ್ಡಿಯನ್ನು ಏಲಂ ಮಾಡುವ ಮುಖಾಂತರ ಅಥವಾ ಕಟ್ಟುನಿಟ್ಟಿನ ನಿಯಂತ್ರಣದಿಂದ ರಕ್ಷಿಸಲು ಸಾಧ್ಯವಿಲ್ಲವೆ?

ಈ) ಈ ವಿಷಯದಲ್ಲಿ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಹೆಚ್.ವೈ. ಮೇಟಿ (ಅರಣ್ಯ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿದೆ.